**All India Radio: Bangalore**
**National Bulletin In Kannada**
**12.04.2026  7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**12.04.2026  7.35 am**

**<>><><*><><<>**

ಮುಖ್ಯಾಂಶಗಳು

೧. ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆ; ಪ್ರಧಾನಿ ನರೇಂದ್ರ ಮೋದಿ, ಮಮತಾ ಬ್ಯಾನರ್ಜಿ ಸೇರಿದಂತೆ ಪ್ರಮುಖ ನಾಯಕರಿಂದ ಭಾರೀ ಪ್ರಚಾರ

೨. ಮಧ್ಯಪ್ರಾಚ್ಯ ಸಂಘರ್ಷ; ಇರಾನ್-ಅಮೆರಿಕ ನಡುವೆ ಶಾಂತಿ ಮಾತುಕತೆ ವಿಫಲ

೩. ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಇಂದಿನಿಂದ ಪ್ಯಾರಿಸ್ ಮತ್ತು ಬರ್ಲಿನ್‌ಗೆ ಅಧಿಕೃತ ಭೇಟಿ

೪. ಬಿಹಾರದ ಕತಿಹಾರ್ ಜಿಲ್ಲೆಯಲ್ಲಿ ಭೀಕರ ರಸ್ತೆ ಅಪಘಾತ; ೧೩ ಮಂದಿ ಸಾವು; ಗಣ್ಯರಿಂದ ತೀವ್ರ ಸಂತಾಪ

೫. ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್; ಭಾರತದ ಸುಜೀತ್ ಕಲ್ಕಲ್ ಮತ್ತು ಅಭಿಮನ್ಯು ಮಂಡ್ವಾಲ್‌ಗೆ ಚಿನ್ನದ ಪದಕ

೬. ಐಪಿಎಲ್ ಟಿ-೨೦ ಕ್ರಿಕೆಟ್; ದೆಹಲಿ ಕ್ಯಾಪಿಟಲ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್‌ಗೆ ೨೩ ರನ್‌ಗಳ ಜಯ

**<>><><*><><<>**

ಪಶ್ಚಿಮ ಬಂಗಾಳದಲ್ಲಿ ವಿಧಾನಸಭಾ ಚುನಾವಣೆಯ ಪ್ರಚಾರ ಬಿರುಸುಗೊಂಡಿದ್ದು, ಎಲ್ಲಾ ಪ್ರಮುಖ ರಾಜಕೀಯ ಪಕ್ಷಗಳ ಉನ್ನತ ನಾಯಕರು ಜಿಲ್ಲೆಗಳಾದ್ಯಂತ ರ‍್ಯಾಲಿಗಳನ್ನು ಉದ್ದೇಶಿಸಿ ಮಾತನಾಡುತ್ತಿದ್ದಾರೆ. ಪ್ರಧಾನಿ ಮತ್ತು ಹಿರಿಯ ಬಿಜೆಪಿ ನಾಯಕ ನರೇಂದ್ರ ಮೋದಿ ಅವರು, ನಿನ್ನೆ ಕಟ್ವಾ, ಜಂಗಿಪುರ ಮತ್ತು ಕುಶ್ಮಂಡಿಯಲ್ಲಿ ಮೂರು ರ‍್ಯಾಲಿಗಳಲ್ಲಿ ಭಾಗವಹಿಸಿದ್ದರು. ರ‍್ಯಾಲಿಯನ್ನುದ್ದೇಶಿಸಿ ಮಾತನಾಡಿದ ಪ್ರಧಾನಿ, ದೇಶದಲ್ಲಿ ಅಕ್ರಮ ಒಳನುಸುಳುವಿಕೆಯ ವಿರುದ್ಧ ಬಿಜೆಪಿಯ ಧ್ವನಿಯನ್ನು ಪುನರುಚ್ಚರಿಸಿದರು. ಇದೇ ವೇಳೆ, ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತರುವುದಾಗಿ ಅವರು ಭರವಸೆ ನೀಡಿದರು. ಪಶ್ಚಿಮ ಬಂಗಾಳದ ಬಂಕುರಾ ಮತ್ತು ಪುರುಲಿಯಾದಲ್ಲಿ ನಡೆದ ರ‍್ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದ ಹಿರಿಯ ಬಿಜೆಪಿ ನಾಯಕ ಅಮಿತ್ ಶಾ, ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ೪೫ ದಿನಗಳಲ್ಲಿ ರಾಜ್ಯ ಸರ್ಕಾರಿ ನೌಕರರಿಗೆ ಏಳನೇ ವೇತನ ಆಯೋಗದ ಪ್ರಯೋಜನಗಳನ್ನು ನೀಡಲಾಗುವುದು ಎಂದು ಭರವಸೆ ನೀಡಿದರು. ತೃಣಮೂಲ ಕಾಂಗ್ರೆಸ್ ಮುಖ್ಯಸ್ಥೆ ಮಮತಾ ಬ್ಯಾನರ್ಜಿ ಬಂಕುರಾ, ಪಶ್ಚಿಮ ಮಿಡ್ನಾಪುರ ಮತ್ತು ಜಾರ್ಗ್ರಾಮ್‌ನಲ್ಲಿ ಸಾರ್ವಜನಿಕ ರ‍್ಯಾಲಿಗಳಲ್ಲಿ ಭಾಗವಹಿಸಿ ಮಾತನಾಡಿದರು. ಎನ್‌ಆರ್‌ಸಿ ಮತ್ತು ಧಾರ್ಮಿಕ ಧ್ರುವೀಕರಣದ ಮೂಲಕ

ಬಂಗಾಳವನ್ನು ವಿಭಜಿಸಲು ಬಿಜೆಪಿ ಸಂಚು ರೂಪಿಸುತ್ತಿದೆ ಎಂದು ಅವರು ಆರೋಪಿಸಿದರು. ೨೯೪ ಸದಸ್ಯರ ಪಶ್ಚಿಮ ಬಂಗಾಳ ವಿಧಾನಸಭೆಗೆ ಏಪ್ರಿಲ್ ೨೩ ಮತ್ತು ಏಪ್ರಿಲ್ ೨೯ ರಂದು ಎರಡು ಹಂತಗಳಲ್ಲಿ ಮತದಾನ ನಡೆಯಲಿದೆ.

**<>><><*><><<>**

ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಸ್ರಿ ಇಂದಿನಿಂದ ಇದೇ ೧೪ ರವರೆಗೆ ಪ್ಯಾರಿಸ್ ಮತ್ತು ಬರ್ಲಿನ್‌ಗೆ ಅಧಿಕೃತ ಭೇಟಿ ನೀಡಲಿದ್ದಾರೆ. ಪ್ಯಾರಿಸ್‌ನಲ್ಲಿ ಅವರು, ಫ್ರಾನ್ಸ್ ವಿದೇಶಾಂಗ ಸಚಿವಾಲಯದ ಪ್ರಧಾನ ಕಾರ್ಯದರ್ಶಿ ಮಾರ್ಟಿನ್ ಬ್ರಿಯಾನ್ಸ್ ಅವರೊಂದಿಗೆ ಭಾರತ-ಫ್ರಾನ್ಸ್ ವಿದೇಶಾಂಗ ಕಚೇರಿ ಸಮಾಲೋಚನೆಗಳ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ರಕ್ಷಣೆ, ನಾಗರಿಕ ಪರಮಾಣು ಶಕ್ತಿ, ಬಾಹ್ಯಾಕಾಶ, ಸೈಬರ್ ಮತ್ತು ಡಿಜಿಟಲ್, ಕೃತಕಬುದ್ಧಿಮತ್ತೆ, ನಾವೀನ್ಯತೆ ಮತ್ತು ಜನರಿಂದ ಜನರಿಗೆ ವಿನಿಮಯ ಹಾಗೂ ಸಾಂಸ್ಕೃತಿಕ ಸಂಬಂಧಗಳನ್ನು ಬೆಳೆಸುವ ಉಪಕ್ರಮಗಳು ಸೇರಿದಂತೆ ವ್ಯಾಪಕ ಶ್ರೇಣಿಯ ವಿಷಯಗಳ ಕುರಿತು ಚರ್ಚೆ ನಡೆಯಲಿವೆ. ಇತ್ತೀಚಿನ ಜಾಗತಿಕ ಮತ್ತು ಪ್ರಾದೇಶಿಕ ಬೆಳವಣಿಗೆಗಳ ಬಗ್ಗೆಯೂ ಚರ್ಚಿಸಲಾಗುವುದು ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಬರ್ಲಿನ್‌ನಲ್ಲಿ, ವಿದೇಶಾಂಗ ಕಾರ್ಯದರ್ಶಿ, ಜರ್ಮನ್ ವಿದೇಶಾಂಗ ಕಚೇರಿಯ ರಾಜ್ಯ ಕಾರ್ಯದರ್ಶಿ ಡಾ.ಗೆಜಾ ಆಂಡ್ರಿಯಾಸ್ ವಾನ್ ಗೇರ್ ಅವರೊಂದಿಗೆ ಭಾರತ-ಜರ್ಮನಿ ವಿದೇಶಾಂಗ ಕಚೇರಿ ಸಮಾಲೋಚನೆಗಳ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ. ಚರ್ಚೆಯು, ವ್ಯಾಪಾರ ಮತ್ತು ಹೂಡಿಕೆಗಳು, ರಕ್ಷಣೆ ಮತ್ತು ಭದ್ರತೆ, ತಂತ್ರಜ್ಞಾನ, ಹಸಿರು ಶಕ್ತಿ, ಶಿಕ್ಷಣ ಹಾಗೂ ಪರಸ್ಪರ ಆಸಕ್ತಿಯ ಜಾಗತಿಕ ಮತ್ತು ಪ್ರಾದೇಶಿಕ ವಿಷಯಗಳು ಸೇರಿದಂತೆ ದ್ವಿಪಕ್ಷೀಯ ಸಹಕಾರದ ವೈವಿಧ್ಯಮಯ ಕ್ಷೇತ್ರಗಳನ್ನು ಒಳಗೊಂಡಿರುತ್ತವೆ.

**<>><><*><><<>**

ಬಿಹಾರದ ಕತಿಹಾರ್ ಜಿಲ್ಲೆಯಲ್ಲಿ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ೧೩ ಜನರು ಸಾವನ್ನಪ್ಪಿದ್ದು, ಹಲವರು ಗಾಯಗೊಂಡಿದ್ದಾರೆ. ರಾಷ್ಟ್ರೀಯ ಹೆದ್ದಾರಿ ೩೧ ರ ಕೋಢಾ ಬ್ಲಾಕ್‌ನ ಬಸ್ಗಢಾ ಚೌಕ್ ಬಳಿ ನಿನ್ನೆ ಸಂಜೆ ೬ ಗಂಟೆ ಸುಮಾರಿಗೆ ಬಸ್ ಮತ್ತು ಪಿಕಪ್ ವಾಹನ ಡಿಕ್ಕಿ ಹೊಡೆದ ಪರಿಣಾಮ ಈ ಅಪಘಾತ ಸಂಭವಿಸಿದೆ. ಘಟನೆಯಲ್ಲಿ ಒಬ್ಬ ಮೋಟಾರ್ ಸೈಕಲ್ ಸವಾರ ಕೂಡ ಸಾವನ್ನಪ್ಪಿದ್ದಾನೆ. ಎಲ್ಲಾ ಗಾಯಾಳುಗಳನ್ನು ಚಿಕಿತ್ಸೆಗಾಗಿ ಕೋಢಾ ಪ್ರಾಥಮಿಕ ಆರೋಗ್ಯ ಕೇಂದ್ರ ಮತ್ತು ಪೂರ್ಣಿಯಾ ವೈದ್ಯಕೀಯ ಕಾಲೇಜಿಗೆ ದಾಖಲಿಸಲಾಗಿದೆ. ಸ್ಥಳೀಯ ನಿವಾಸಿಗಳ ಪ್ರಕಾರ, ಧಾರ್ಮಿಕ ವಿಧಿವಿಧಾನವನ್ನು ಮುಗಿಸಿ ಜಾರ್ಖಂಡ್‌ನಿಂದ ಪುರ್ನಿಯಾಗೆ ಹಿಂತಿರುಗುತ್ತಿದ್ದ ಸಂದರ್ಭದಲ್ಲಿ ಭಕ್ತರ ಗುಂಪೊಂದು ಪಿಕಪ್ ವಾಹನದಲ್ಲಿ ಪ್ರಯಾಣಿಸುತ್ತಿತ್ತು. ವಿರುದ್ಧ ದಿಕ್ಕಿನಿಂದ ವೇಗವಾಗಿ ಬರುತ್ತಿದ್ದ ಬಸ್ ಪಿಕಪ್ ವಾಹನಕ್ಕೆ ಡಿಕ್ಕಿ ಹೊಡೆದ ಪರಿಣಾಮ ಅಪಘಾತ ಸಂಭವಿಸಿದೆ. ಕತಿಹಾರ್ ಪೊಲೀಸ್ ವರಿಷ್ಠಾಧಿಕಾರಿ ಶಿಖರ್ ಚೌಧರಿ ಘಟನೆಯನ್ನು ದೃಢಪಡಿಸಿದ್ದಾರೆ. ಈ ನಡುವೆ, ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್, ಈ ಘಟನೆಯ ಬಗ್ಗೆ ತೀವ್ರ ದುಃಖ ವ್ಯಕ್ತಪಡಿಸಿದ್ದು, ಸಂತಾಪ ಸೂಚಿಸಿದ್ದಾರೆ. ಮೃತರ ಸಂಬಂಧಿಕರಿಗೆ ಮುಖ್ಯಮಂತ್ರಿಗಳ ಪರಿಹಾರ ನಿಧಿಯಿಂದ ತಲಾ ೨ ಲಕ್ಷ ರೂಪಾಯಿಗಳ ಪರಿಹಾರ ನೀಡುವುದಾಗಿ ಘೋಷಿಸಿದರು. ಗಾಯಾಳುಗಳಿಗೆ ೫೦ ಸಾವಿರ ರೂಪಾಯಿ ಪರಿಹಾರ ನೀಡಲಾಗುವುದು ಎಂದು ತಿಳಿಸಿದ್ದಾರೆ. ಘಟನೆಗೆ ರಾಷ್ಟ್ರಪತಿ ದ್ರೌಪದಿ ಮುರ್ಮು, ಪ್ರಧಾನಿ ನರೇಂದ್ರ ಮೋದಿ ಮತ್ತು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ತೀವ್ರ ದುಃಖ ವ್ಯಕ್ತಪಡಿಸಿದ್ದಾರೆ.

**<>><><*><><<>**

ಪ್ರಧಾನಿ ನರೇಂದ್ರ ಮೋದಿ ಇದೇ ೧೫ರಂದು ಕರ್ನಾಟಕದ ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಆದಿಚುಂಚನಗಿರಿ ಮಹಾಸಂಸ್ಥಾನ ಮಠಕ್ಕೆ ಭೇಟಿ ನೀಡುವ ಹಿನ್ನೆಲೆಯಲ್ಲಿ ಶಿಷ್ಟಾಚಾರದಂತೆ ಅಧಿಕಾರಿಗಳು ಕೆಲಸ ನಿರ್ವಹಣೆ ಮಾಡಬೇಕು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ತಿಳಿಸಿದ್ದಾರೆ. ಜಿಲ್ಲಾಧಿಕಾರಿ ಕಚೇರಿಯಲ್ಲಿ ಅಧಿಕಾರಿಗಳ ತುರ್ತು ಸಭೆ ನಡೆಸಿದ ಅವರು, ಆದಿಚುಂಚನಗಿರಿ ಮಹಾಸಂಸ್ಥಾನ ಮಠದಲ್ಲಿ ನಿರ್ಮಿಸಲಾಗಿರುವ ಡಾ.ಬಾಲಗಂಗಾಧರನಾಥ ಮಂದಿರದ ಲೋಕಾರ್ಪಣೆ ಮತ್ತು ವಿಗ್ರಹ ಪ್ರಾಣ ಪ್ರತಿಷ್ಠಾಪನಾ ಕಾರ್ಯಕ್ರಮವನ್ನು ಪ್ರಧಾನಿ ನೆರವೇರಿಸಲಿದ್ದಾರೆ. ನಂತರ ಬಿಜಿಎಸ್ ಕ್ರೀಡಾಂಗಣದಲ್ಲಿ ಬೃಹತ್ ವೇದಿಕೆ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ಅವರು ಮಾಹಿತಿ ನೀಡಿದ್ದಾರೆ.. ಕಾರ್ಯಕ್ರಮ ದಿನದಂದು ಪ್ರಧಾನಿ ಹಾಗೂ ಅವರ ಭದ್ರತಾ ಸಿಬ್ಬಂದಿ ಆಗಮಿಸಲು ಹೆಲಿಪ್ಯಾಡ್ ಹಾಗೂ ಗ್ರೀನ್‌ಹೌಸ್ ನಿರ್ಮಾಣ ಮಾಡಬೇಕು, ಕಾರ್ಯಕ್ರಮ ನಡೆಯುವ ಸಮಯದಲ್ಲಿ ನಿರಂತರವಾಗಿ ವಿದ್ಯುತ್ ಸಂಪರ್ಕ ಕಲ್ಪಿಸಬೇಕು, ವಾಹನಗಳ ಪಾರ್ಕಿಂಗ್ ವ್ಯವಸ್ಥೆಗೆ ಅಗತ್ಯ ಕ್ರಮವಹಿಸಬೇಕು ಎಂದು ಅವರು ತಿಳಿಸಿದ್ದಾರೆ.

<>><><*><><<>

ಪಾಕಿಸ್ತಾನದ ರಾಜಧಾನಿ ಇಸ್ಲಾಮಾಬಾದ್‌ನಲ್ಲಿ ಸುಮಾರು ೨೧ ಗಂಟೆಗಳ ಕಾಲ ನಡೆದ ಮಾತುಕತೆಗಳ ನಂತರ ಅಮೆರಿಕ ಮತ್ತು ಇರಾನ್ ನಡುವಿನ ಮಾತುಕತೆಗಳು ಒಪ್ಪಂದವಿಲ್ಲದೆ ಕೊನೆಗೊಂಡಿವೆ. ಚರ್ಚೆಗಳು ಗಣನೀಯವಾಗಿದ್ದು, ಒಪ್ಪಂದವನ್ನು ರೂಪಿಸುವಲ್ಲಿ ವಿಫಲವಾದವು ಎಂದು ಅಮೆರಿಕದ ಉಪಾಧ್ಯಕ್ಷ ಜೆಡಿ ವ್ಯಾನ್ಸ್ ತಿಳಿಸಿದ್ದಾರೆ. ಪರಮಾಣು ಶಸ್ತ್ರಾಸ್ತ್ರಗಳು ಸಕ್ರಿಯಗೊಳಿಸುವ ಸಾಮರ್ಥ್ಯಗಳನ್ನು ಅನುಸರಿಸದಂತೆ ಟೆಹ್ರಾನ್‌ನಿಂದ ಸ್ಪಷ್ಟ ಮತ್ತು ದೀರ್ಘಕಾಲೀನ ಬದ್ಧತೆಯ ವಾಷಿಂಗ್ಟನ್‌ನ ಬೇಡಿಕೆಯೇ ಭಿನ್ನಾಭಿಪ್ರಾಯದ ಮೂಲ ಎಂದು ಅಮೆರಿಕದ ಉಪಾಧ್ಯಕ್ಷರು ತಿಳಿಸಿದ್ದಾರೆ.

<>><><*><><<>

ಭಾರತೀಯ ಧ್ವಜಹೊತ್ತ ಹಡಗು ಜಗ್ ವಿಕ್ರಮ್, ೨೪ ಭಾರತೀಯ ಸಿಬ್ಬಂದಿಗಳಿಂದ ಪರ್ಷಿಯನ್ ಕೊಲ್ಲಿ ಪ್ರದೇಶದಿಂದ ಯಶಸ್ವಿಯಾಗಿ ಹೊರಟಿದೆ ಎಂದು ಕೇಂದ್ರ ಬಂದರುಗಳು, ಹಡಗು ಸಾಗಣೆ ಮತ್ತು ಜಲಮಾರ್ಗ ಸಚಿವ ಸರ್ಬಾನಂದ ಸೋನೋವಾಲ್ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಸರಕು ೨೦ ಸಾವಿರದ ೪೧೨ ಮೆಟ್ರಿಕ್ ಟನ್ ಎಲ್‌ಪಿಜಿಯನ್ನು ಹೊತ್ತು ತರುತ್ತಿದೆ. ಮತ್ತು ಅದರ ಆಗಮನದ ಅಂದಾಜು ಸಮಯ ಈ ತಿಂಗಳ ೧೫ ಎಂದು ಸಚಿವರು ತಿಳಿಸಿದ್ದಾರೆ.

<>><><*><><<>

ಕಿರ್ಗಿಸ್ತಾನ್‌ನ ಬಿಷ್ಕೆಕ್‌ನಲ್ಲಿ ನಡೆದ ಏಷ್ಯನ್ ಕುಸ್ತಿ ಚಾಂಪಿಯನ್‌ಶಿಪ್‌ನಲ್ಲಿ ಭಾರತದ ಸುಜೀತ್ ಕಲ್ಕಲ್ ಮತ್ತು ಅಭಿಮನ್ಯು ಮಂಡ್ವಾಲ್ ಕ್ರಮವಾಗಿ ಪುರುಷರ ೬೫ ಕೆಜಿ ಮತ್ತು ೭೦ ಕೆಜಿ ಫ್ರೀಸ್ಟೈಲ್ ವಿಭಾಗಗಳಲ್ಲಿ ಚಿನ್ನದ ಪದಕಗಳನ್ನು ಗೆದ್ದರು. ೬೫ ಕೆಜಿ ಫೈನಲ್‌ನಲ್ಲಿ ಸುಜೀತ್, ಉಜ್ಬೇಕಿಸ್ತಾನದ ಉಮಿಡ್ಜಾನ್ ಜಲೋಲೋವ್ ವಿರುದ್ಧ ೮-೧ ಅಂತರದಲ್ಲಿ ಪ್ರಾಬಲ್ಯ ಸಾಧಿಸಿದರು.

<>><><*><><<>

ಚೆನ್ನೈನ ಎಂ.ಎ.ಚಿದಂಬರಂ ಕ್ರಿಕೆಟ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಚೆನ್ನೈ ಸೂಪರ್ ಕಿಂಗ್ಸ್ ೨೭ ರನ್‌ಗಳಿಂದ ಜಯ ದಾಖಲಿಸಿತು.

<><><*><><<>

ನವದೆಹಲಿಯಲ್ಲಿ ನಡೆದ ಭಾರತೀಯ ಅಥ್ಲೆಟಿಕ್ಸ್ ಸರಣಿಯಲ್ಲಿ, ಏಷ್ಯನ್ ಚಾಂಪಿಯನ್‌ಶಿಪ್ ಕಂಚಿನ ಪದಕ ವಿಜೇತ ಅನಿಮೇಶ್ ಕುಜುರ್ ಮತ್ತು ಎರಡು ಬಾರಿ ಒಲಿಂಪಿಯನ್ ತಜಿಂದರ್‌ಪಾಲ್ ಸಿಂಗ್ ತೂರ್ ಕ್ರಮವಾಗಿ ಪುರುಷರ ೧೦೦ ಮೀಟರ್ ಮತ್ತು ಶಾಟ್‌ಪುಟ್ ಪ್ರಶಸ್ತಿಗಳನ್ನು ಗೆದ್ದಿದ್ದಾರೆ. ಮಹಿಳೆಯರ ೧೦೦ ಮೀಟರ್ ಓಟದಲ್ಲಿ, ನಿತ್ಯಾ ಗಂಧೆ ೧೧.೫೯ ಸೆಕೆಂಡುಗಳಲ್ಲಿ ಗುರಿ ತಲುಪಿ ಸ್ನೇಹಾ ಎಸ್.ಎಸ್. ಮತ್ತು ತಮನ್ನಾ ಅವರಿಗಿಂತ ಮುಂದಿದ್ದರು. ತಜಿಂದರ್‌ಪಾಲ್ ಸಿಂಗ್ ತೂರ್ ಪುರುಷರ ಶಾಟ್‌ಪುಟ್‌ನಲ್ಲಿ ೨೧.೦೭ ಮೀಟರ್ ಅತ್ಯುತ್ತಮ ಪ್ರಯತ್ನದೊಂದಿಗೆ ಗೆಲುವು ಸಾಧಿಸಿದರು. ಕರಣ್‌ವೀರ್ ಸಿಂಗ್ ಎರಡನೇ ಸ್ಥಾನ ಪಡೆದರೆ, ಅನುರಾಗ್ ಸಿಂಗ್ ಕಲೇರ್ ಮೂರನೇ ಸ್ಥಾನ ಪಡೆದರು. ಪುರುಷರ ಜಾವೆಲಿನ್ ಎಸೆತದಲ್ಲಿ, ರೋಹಿತ್ ಯಾದವ್ ಕ್ರಮವಾಗಿ ೮೨.೧೬ ಮೀಟರ್ ಮತ್ತು ೮೧.೯೫ ಮೀಟರ್ ದೂರ ಎಸೆದು ಸಚಿನ್ ಯಾದವ್ ಅವರನ್ನು ಹಿಂದಿಕ್ಕಿದರು, ಈ ನಡುವೆ ಯಶ್ವೀರ್ ಸಿಂಗ್ ಕಂಚಿನ ಪದಕ ಗೆದ್ದರು. ಚತೀರ್ಥೇಶ್ ಪಿ. ಶೆಟ್ಟಿ ಮತ್ತು ಸಂತೋಷ್ ಎಸ್ ಅವರಿಗಿಂತ ೪೫.೪೪ ಸೆಕೆಂಡುಗಳಲ್ಲಿ ವಿಶಾಲ್ ಟಿಕೆ ಪುರುಷರ ೪೦೦ ಮೀಟರ್ ಪ್ರಶಸ್ತಿಯನ್ನು ಗೆದ್ದರು.

<><><*><><<>

ಸೈಪ್ರಸ್‌ನ ಪಾಫೋಸ್‌ನಲ್ಲಿ ನಡೆದ ಚೆಸ್ ಪಂದ್ಯದಲ್ಲಿ ನಿನ್ನೆ ಭಾರತೀಯ ಗ್ರ್ಯಾಂಡ್‌ಮಾಸ್ಟರ್ ಆರ್.ವೈಶಾಲಿ ಮಹಿಳಾ ಅಭ್ಯರ್ಥಿಗಳ ಟೂರ್ನಮೆಂಟ್‌ನ ೧೧ ನೇ ಸುತ್ತಿನಲ್ಲಿ ರಷ್ಯಾದ ಅಲೆಕ್ಸಾಂಡ್ರಾ ಗೋರಿಯಾಚ್ಕಿನಾ ಅವರನ್ನು ಸೋಲಿಸಿದರು, ಈ ಸ್ಪರ್ಧೆಯ ನಾಲ್ಕನೇ ಗೆಲುವಿನೊಂದಿಗೆ, ವೈಶಾಲಿ ೧೧ ಪಂದ್ಯಗಳಿಂದ ಏಳು ಅಂಕಗಳನ್ನು ಗಳಿಸಿ ಅಗ್ರಸ್ಥಾನ ಪಡೆದರು. ಈ ನಡುವೆ, ದಿವ್ಯಾ ದೇಶ್ಮುಖ್ ಚೀನಾದ ಜಿನರ್ ಝು ಅವರನ್ನು ಡ್ರಾದಲ್ಲಿ ಕೊನೆಗೊಳಿಸಿದರೆ, ಕಟೆರಿನಾ ಲಗ್ನೋ ಅನ್ನಾ ಮುಝಿಚುಕ್ ಅವರೊಂದಿಗೆ ಡ್ರಾ ಮಾಡಿಕೊಂಡರು.

**<><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ ><><<>**